ಕನ್ನಡ ಸಾಹಿತ್ಯ ಪರಿಷತ್ತು
ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪, ೨೨೪೨೩೮೬೭, ೨೬೬೭೨೯೯೨
http://www.kasapa.in e-mail : kannadaparishattu@gmail.com

ಕ್ರಮಸಂಖ್ಯೆ : ಕಸಾಪ / **ಪ್ರಕಟಣೆ**/ ೨೦೨೩–೨೪ ದಿನಾಂಕ : ೧೯–೦೭–೨೦೨೩

*ಇವರಿಗೆ*
**ಸಂಪಾದಕರು / ಮುಖ್ಯ ವರದಿಗಾರರು**
..................................................ಬೆಂಗಳೂರು

ಪ್ರಕಟಣೆಯ ಕೃಪೆಗಾಗಿ

# ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಾದ ರಾಜರ್ಷಿ ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ ಪುತ್ಥಳಿ ಅನಾವರಣ ಕಾರ್ಯಕ್ರಮ

ಬೆಂಗಳೂರು: ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪಕರಾದ ರಾಜರ್ಷಿ ನಾಲ್ವಡಿ ಶ್ರೀಕೃಷ್ಣರಾಜ ಒಡೆಯರ್ ಅವರ ಪುತ್ಥಳಿ ಅನಾವರಣ ಕಾರ್ಯಕ್ರಮವು **ಜುಲೈ ೨೧ನೆಯ ತಾರೀಖು ಶುಕ್ರವಾರ ಸಂಜೆ ೫ ಗಂಟೆಗೆ ಕನ್ನಡ ಸಾಹಿತ್ಯ ಪರಿಷತ್ತಿನ ಆವರಣದಲ್ಲಿ ನಡೆಯಲಿದೆ.** ಕರ್ನಾಟಕ ರಾಜ್ಯದ ಮಾನ್ಯ ಮುಖ್ಯಮಂತ್ರಿಗಳಾದ ಸನ್ಮಾನ್ಯ **ಶ್ರೀ ಸಿದ್ದರಾಮಯ್ಯನವರು** ಮತ್ತು ಮೈಸೂರು ಅರಸರಾದ **ಶ್ರೀ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್** ಅವರು ಪುತ್ಥಳಿಯನ್ನು ಅನಾವರಣಗೊಳಿಸಲಿದ್ದಾರೆ. ಸರ್ವೋಚ್ಚ ನ್ಯಾಯಾಲಯದ ನಿವೃತ್ತ **ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲರು** ಕಾರ್ಯಕ್ರಮದ ಗೌರವ ಅತಿಥಿಗಳಾಗಿದ್ದು, ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರಾದ **ಶ್ರೀ ಶಿವರಾಜ ತಂಗಡಗಿ** ಮತ್ತು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಖಾತೆ ಸಚಿವರಾದ **ಶ್ರೀ ಬಿ.ಜೆಡ್ ಜಮೀರ್ ಅಹ್ಮದ್ ಖಾನ್** ಅವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ೮೬ನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾದ **ಡಾ.ದೊಡ್ಡರಂಗೇಗೌಡರು** ಮತ್ತು ಕರ್ನಾಟಕದ ಮಾಜಿ ಸಚಿವರಾದ ಎಚ್.ಎಂ. ರೇವಣ್ಣನವರು ಉಪಸ್ಥಿತರಿರುತ್ತಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿಯವರು** ವಹಿಸಲಿದ್ದಾರೆ.

ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ೩೮ ವರ್ಷಗಳ ಕಾಲ ಮೈಸೂರು ಸಂಸ್ಥಾನವನ್ನು ದಕ್ಷವಾಗಿ ಆಳಿ ಮಹಾತ್ಮ ಗಾಂಧೀಜಿಯವರಿಂದಲೇ ‘ ರಾಜರ್ಷಿ’ ಎನ್ನುವ ಪ್ರಶಂಸೆಯನ್ನು ಪಡೆದಿದ್ದರು. ಪ್ರಜಾಪ್ರಭುತ್ವಕ್ಕೆ ಮನ್ನಣೆ ನೀಡಿದ್ದ ಅವರು ಮೀಸಲಾತಿ ಸೌಲಭ್ಯವನ್ನು ಕಲ್ಪಿಸುವ ಮೂಲಕ ಸಾಮಾಜಿಕ ಸಮಾನತೆಯನ್ನು ತಂದರು. ಕೈಗಾರಿಕೆ, ಶಿಕ್ಷಣ, ಬ್ಯಾಂಕಿಂಗ್ ಹೀಗೆ ಹತ್ತಾರು ಕ್ಷೇತ್ರಗಳಲ್ಲಿ ಮಹತ್ವದ ಕೊಡುಗೆಯನ್ನು ನೀಡಿ

ಮೈಸೂರು ಸಂಸ್ಥಾನವನ್ನು ‘ ಮಾದರಿ ಸಂಸ್ಥಾನ’ ವನ್ನಾಗಿ ಮಾಡಿದ್ದರು. ಭಾಷೆ, ಕಲೆ, ಸಾಹಿತ್ಯ, ಸಂಸ್ಕೃತಿ, ಜನಪದ ಇವುಗಳ ಅಭಿವೃದ್ಧಿಗೆ ಪ್ರಾಮುಖ್ಯತೆಯನ್ನು ನೀಡಿ, ೧೯೧೫ರಲ್ಲಿ ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ಥಾಪಿಸಿದ್ದಲ್ಲದೆ ಅದರ ಬೆಳವಣಿಗೆಗೆ ಸಂಪೂರ್ಣ ಪ್ರೋತ್ಸಾಹವನ್ನು ನೀಡಿದರು. ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರು ಭಾಗವಹಿಸಿದ ಕೊನೆಯ ಕಾರ್ಯಕ್ರಮ ಕನ್ನಡ ಸಾಹಿತ್ಯ ಪರಿಷತ್ತಿನ ರಜತೋತ್ಸವ ಕಾರ್ಯಕ್ರಮವೇ ಆಗಿದ್ದು, ಈ ಸಮಾರಂಭದಲ್ಲಿ ಮಾತನಾಡಿ ಅವರು ನುಡಿದ ಕೊನೆಯ ಶಬ್ದ ‘ ಸಿರಿಗನ್ನಡಂ ಗೆಲ್ಗೆ’ ಯಾಗಿತ್ತು. ನಾಲ್ವಡಿ ಶ್ರೀ ಕೃಷ್ಣ ರಾಜ ಒಡೆಯರ ಪುತ್ಥಳಿಯು ಮೊದಲು ಕನ್ನಡ ಸಾಹಿತ್ಯ ಪರಿಷತ್ತಿನ ಮೊದಲ ಮಹಡಿಯಲ್ಲಿ ಇದ್ದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರನ್ನು ನೋಡಲು ಬರುವವರು ಮಾತ್ರ ಮಹಾರಾಜರ ದರ್ಶನವನ್ನು ಪಡೆಯ ಬಹುದಿತ್ತು. ಈಗ ಈ ಪುತ್ಥಳಿಯನ್ನು ಆವರಣದಲ್ಲಿ ಸ್ಥಾಪನೆ ಮಾಡುವ ಮೂಲಕ ಸಮಸ್ತ ಕನ್ನಡಿಗರೂ ಗೌರವ ಸಲ್ಲಿಸುವ ಮುಕ್ತ ಅವಕಾಶವನ್ನು ಕಲ್ಪಿಸುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತು ತನ್ನ ಸಂಸ್ಥಾಪಕರನ್ನು ವಿಶೇಷವಾಗಿ ಗೌರವಿಸುತ್ತಿದೆ ಎಂದು ಹೇಳಿರುವ **ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿಯವರು ಸಮಸ್ತ ಕನ್ನಡಿಗರನ್ನು ಕಾರ್ಯಕ್ರಮಕ್ಕೆ ಪ್ರೀತಿ ಪೂರ್ವಕವಾಗಿ ಆಹ್ವಾನಿಸಿದ್ದಾರೆ.**

ತಾವು ಈ ಸುದ್ದಿಯನ್ನು ತಮ್ಮ ಪತ್ರಿಕೆಯಲ್ಲಿ ಪ್ರಕಟಿಸುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಕನ್ನಡಿಗರು ಭಾಗಿಯಾಗಲು ಅನುಕೂಲ ಮಾಡಿ ಕೊಡಬೇಕೆಂದೂ ಮತ್ತು ಕಾರ್ಯಕ್ರಮಕ್ಕೆ ತಮ್ಮ ವರದಿಗಾರರನ್ನು ಮತ್ತು ಛಾಯಾಗ್ರಾಹಕರನ್ನು ಕಳುಹಿಸಿ ಕಾರ್ಯಕ್ರಮದ ಯಶಸ್ಸಿಗೆ ಕಾರಣರಾಗ ಬೇಕೆಂದೂ ಕೋರಿಕೆ.

– ಎನ್.ಎಸ್. ಶ್ರೀಧರಮೂರ್ತಿ
ಮಾಧ್ಯಮ ಸಲಹೆಗಾರರು, ಕನ್ನಡ ಸಾಹಿತ್ಯ ಪರಿಷತ್ತು